(ಅನುಬಂಧ–5)

5. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2013

ಶ್ರೀ ಎಸ್.ಕೆ.ಬೆಳ್ಳುಬ್ಬಿ (ಕೃಷಿ ಮಾರುಕಟ್ಟೆ, ಹಜ್ ಮತ್ತು ವಕ್ಫ್ ಸಚಿವರು) : ಮಾನ್ಯ ಅಧ್ಯಕ್ಷರೆ, '2013 ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : "2013 ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ" ವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕದ ಮಂಡನೆಗೆ ಅನುಮತಿ ನೀಡಲಾಯಿತು.

ಶ್ರೀ. ಎಸ್.ಕೆ.ಬೆಳ್ಳುಬ್ಬಿ (ಕೃಷಿ ಮಾರುಕಟ್ಟೆ, ಹಜ್ ಮತ್ತು ವಕ್ಫ್ ಸಚಿವರು) : ಮಾನ್ಯ ಅಧ್ಯಕ್ಷರೆ, '2013 ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–6)

6. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ವಿಧೇಯಕ, 2013

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು) : ಮಾನ್ಯ ಅಧ್ಯಕ್ಷರೆ, '2013 ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ

(ತಿದ್ದುಪಡಿ) ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : "2013 ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ" ವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕದ ಮಂಡನೆಗೆ ಅನುಮತಿ ನೀಡಲಾಯಿತು.

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು): ಮಾನ್ಯ ಅಧ್ಯಕ್ಷರೆ, '2013 ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–7)

ಆ. ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ [ತಿದ್ದುಪಡಿ] ವಿಧೇಯಕ, 2013

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಟಿ.ರವಿ [ಮಾನ್ಯ ಉನ್ನತ ಶಿಕ್ಷಣ ಸಚಿವರು] : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ವಿಧೇಯಕದ ಬಗ್ಗೆ ಸದನಕ್ಕೆ explain ಮಾಡಿ.